For More JobNews Visit: www.kpscvaani.com

ಕರ್ನಾಟಕ ವಿಧಾನ ಸಭೆ

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1766
2. ಸದಸ್ಯರ ಹೆಸರು : ಶ್ರೀ ಕುಸುಮಾವತಿ ಚನ್ನಬಸಪ್ಪ ಶಿವಳ್ಳಿ (ಕುಂದಗೋಳ)
3. ಉತ್ತರಿಸುವ ದಿನಾಂಕ : 21.12.2021
4. ಉತ್ತರಿಸುವ ಸಚಿವರು : ಮುಖ್ಯಮಂತ್ರಿ

ಕ್ರ. ಸಂ	ಉಪ ಪ್ರಶ್ನೆಗಳು	ಉತ್ತರ
ಅ	ರಾಜ್ಯದಲ್ಲಿ ಖಾಲಿಯಿರುವ ಕೆ.ಎ.ಎಸ್ – ಗೆಜೆಟೆಡ್ ಪ್ರೊಬೇಷನರಿ ಹುದ್ದೆಗಳು ಎಷ್ಟು; (ಇಲಾಖಾವಾರು ಖಾಲಿಯಿರುವ ಹುದ್ದೆಗಳವಾರು ಮಾಹಿತಿ ನೀಡುವುದು)	ಕೆ.ಎ.ಎಸ್ (ಕಿ.ಶ್ರೇ) ವೃಂದದ ನೇರ ನೇಮಕಾತಿ ಕೋಟಾದಡಿ 45 ಹುದ್ದೆಗಳು ಖಾಲಿ ಇರುತ್ತವೆ.
ಆ	ಯಾವ ಕಾಲಮಿತಿಯೊಳಗೆ ಈ ಖಾಲಿಯಿರುವ ಹುದ್ದೆಗಳನ್ನು ನೇಮಕಾತಿ ಮಾಡಿಕೊಳ್ಳಲಾಗುವುದು;	ಅಂಗವಿಕಲ ಮೀಸಲಾತಿಯನ್ನು ಹೆಚ್ಚಿಸಲಾಗಿದ್ದು ಹಾಗೂ ಹೊಸದಾಗಿ ತೃತೀಯ ಲಿಂಗದ ಅಭ್ಯರ್ಥಿಗಳಿಗೂ ಕೂಡಾ ಮೀಸಲಾತಿಯನ್ನು ಕಲ್ಪಿಸಿರುವುದರಿಂದ, ಅದರಂತೆ ಪರಿಶೀಲಿಸಿ ಖಾಲಿಯಿರುವ ಹುದ್ದೆಗಳನ್ನು ನೇಮಕಾತಿ ಮಾಡಿಕೊಳ್ಳಲು ಕ್ರಮಕೈಗೊಳ್ಳಲಾಗುತ್ತಿದೆ.
ಇ	ಕರ್ನಾಟಕ ಲೋಕಸೇವಾ ಆಯೋಗವು (ಕೆ.ಪಿ.ಎಸ್.ಸಿ) ಕೆ.ಎ.ಎಸ್ ಹುದ್ದೆಗಳ ನೇಮಕಾತಿ ಪ್ರಕ್ರಿಯೆಯನ್ನು ಪ್ರತಿ ಧಾರಿ ತೀವ್ರ ವಿಳಂಬ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದಲ್ಲಿ, ಈ ವಿಳಂಬ ನೀತಿಯನ್ನು ತಡೆಗಟ್ಟಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು;	
ಈ	ಪ್ರಸ್ತುತ ನೇಮಕಾತಿ ಹಂತದಲ್ಲಿರುವ ಕೆ.ಎ.ಎಸ್. ಹುದ್ದೆಗಳ ನೇಮಕಾತಿಯನ್ನು ಯಾವಾಗ ಪೂರ್ಣಗೊಳಿಸಲಾಗುವುದು;	2017–18ನೇ ಸಾಲಿನ 105 ಗೆಜೆಟೆಡ್ ಪ್ರೊಬೇಷನರ್ಸ್ ಹುದ್ದೆಗಳ ನೇಮಕಾತಿಗೆ ದಿನಾಂಕ: 31.01.2020 ರಂದು ಕರ್ನಾಟಕ ಲೋಕಸೇವಾ ಆಯೋಗವು ಅಧಿಸೂಚನೆಯನ್ನು ಹೊರಡಿಸಿದೆ. ನೇಮಕಾತಿ ಪ್ರಕ್ರಿಯೆಯು ಜಾರಿಯಲ್ಲಿರುತ್ತದೆ ಎಂದು ಕರ್ನಾಟಕ ಲೋಕಸೇವಾ ಆಯೋಗವು ಮಾಹಿತಿ ನೀಡಿರುತ್ತದೆ.

For More JobNews Visit: www.kpscvaani.com

ಊ	ಹೊಸದಾಗಿ ಕೆ.ಎ.ಎಸ್. ನೇಮಕಾತಿ ಅಧಿಸೂಚನೆಯನ್ನು ಹೊರಡಿಸಲಾಗುವುದು?	ಕರ್ನಾಟಕ ಗೆಜೆಟೆಡ್ ಪ್ರೊಬೇಷನರ್‌ಗಳ ನೇಮಕಾತಿ (ಸ್ಪರ್ಧಾತ್ಮಕ ಪರೀಕ್ಷೆಗಳ ನೇಮಕಾತಿ) ನಿಯಮಗಳು 1997 ಹಾಗೂ ಹಾಲಿ ಜಾರಿಯಲ್ಲಿರುವ ಮೀಸಲಾತಿ ನಿಯಮಗಳನ್ವಯ ಪರಿಶೀಲಿಸಿ, ಕೆ.ಎ.ಎಸ್ ಗೆಜೆಟೆಡ್ ಪ್ರೊಬೇಷನರ್ಸ್ ಹುದ್ದೆಗಳ ನೇಮಕಾತಿಗೆ ಅಧಿಸೂಚನೆ ಹೊರಡಿಸಲಾಗುವುದು.

ಸಂಖ್ಯೆ: ಸಿಆಸುಇ 142 ಎಸ್‌ಎಸ್‌ಸಿ 2021

(ಬಸವರಾಜ ಬೊಮ್ಮಾಯಿ)
ಮುಖ್ಯಮಂತ್ರಿ